**Vijaya Karnataka, Bangalore, August 06, 2010**




ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್ ಗುರುವಾರ ಚೌಡಯ್ಯ ಸ್ಮಾರಕ ಸಭಾಂಗಣದಲ್ಲಿ ಏರ್ಪಡಿಸಿದ್ದ 'ಟಿಸಿಎಸ್ ಐಟಿ ವಿಜ್ 2010' ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಎಸ್‌ಬಿಎಂ ಜೈನ್ ಕಾಲೇಜಿನ ವಿದ್ಯಾರ್ಥಿಗಳಿಗೆ ಲೋಕಾಯುಕ್ತ ನ್ಯಾ. ಸಂತೋಷ್ ಹೆಗ್ಡೆ ಬಹುಮಾನ ವಿತರಿಸಿದರು. ಟಿಸಿಎಸ್ ಬೆಂಗಳೂರು ಮುಖ್ಯಸ್ಥ ನಾಗರಾಜ್ ಇಜಾರಿ ಉಪಸ್ಥಿತರಿದ್ದರು.

# ಭ್ರಷ್ಟಾಚಾರ ನಿಗ್ರಹ ಜಾಗೃತಿ ಮೂಡಿಸಿ

■ ವಿಕ ಸುದ್ದಿಲೋಕ ಬೆಂಗಳೂರು

ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಪಾಠದ ಜತೆಗೆ ಭ್ರಷ್ಟಾಚಾರ ನಿಗ್ರಹದ ಬಗ್ಗೆಯೂ ಜಾಗೃತಿ ಮೂಡಿಸಬೇಕು ಎಂದು ಲೋಕಾಯುಕ್ತ ನ್ಯಾ. ಸಂತೋಷ ಹೆಗ್ಡೆ ಹೇಳಿದ್ದಾರೆ.

ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್ ಗುರುವಾರ ಚೌಡಯ್ಯ ಸ್ಮಾರಕ ಸಭಾಂಗಣದಲ್ಲಿ ಏರ್ಪಡಿಸಿದ್ದ 'ಟಿಸಿಎಸ್ ಐಟಿ ವಿಜ್ 2010' ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಎಸ್‌ಬಿಎಂ ಜೈನ್ ಶಾಲೆ ಮಕ್ಕಳಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಭ್ರಷ್ಟಾಚಾರ ಇಂದು ಕೇವಲ ರಾಜಕೀಯ ಮತ್ತು ಆಡಳಿತಕ್ಕೆ ಮಾತ್ರ ಸೀಮಿತವಾಗಿಲ್ಲ. ಎಲ್ಲ ಕ್ಷೇತ್ರಗಳಿಗೂ ವ್ಯಾಪಿಸಿದೆ. ಯುವಕರು ಮನಸ್ಸು ಮಾಡಿದರೆ ನಿಯಂತ್ರಿಸಬಹುದು ಎಂದರು.

ಟಿಸಿಎಸ್ ಫೈನಾನ್ಷಿಯಲ್ ಸಲ್ಯೂಷನ್‌ನ ಎನ್. ಗಣಪತಿ ಸುಬ್ರಹ್ಮಣ್ಯಂ, ಬೆಂಗಳೂರು ಮುಖ್ಯಸ್ಥ ನಾಗರಾಜ್ ಇಜಾರಿ ಹಾಜರಿದ್ದರು.

**ರಾಷ್ಟ್ರಮಟ್ಟಕ್ಕೆ ಆಯ್ಕೆ:** ಟಿಸಿಎಸ್ ಐಟಿ ವಿಜ್ 2010 ದೇಶದ 12 ಪ್ರಮುಖ ನಗರಗಳಲ್ಲಿ ರಾಷ್ಟ್ರಮಟ್ಟದ ಐಟಿ ರಸಪ್ರಶ್ನೆ ಆಯೋಜಿಸಿದೆ. ಬೆಂಗಳೂರಿನ ಎಸ್‌ಕೆಸಿಎಚ್ ಸಿಬಿಎಸ್‌ಸಿ, ಎಸ್‌ಬಿಎಂ ಜೈನ್, ಎನ್‌ಎಲ್‌ಎಫ್, ಸೇಂಟ್ ಜೋಸೆಫ್ ಬಾಯ್ಸ್ ಸ್ಕೂಲ್, ಬಿಷಪ್ ಕಾಟನ್ ಬಾಯ್ಸ್ ಸ್ಕೂಲ್ ಸೇರಿದಂತೆ 8 ಶಾಲೆಯ ಮಕ್ಕಳು ಅಂತಿಮ ಸುತ್ತಿಗೆ ಆಯ್ಕೆಯಾಗಿದ್ದರು. ಇದರಲ್ಲಿ ಎಸ್‌ಬಿಎಂ ಜೈನ್‌ನ ರಾಧಿಕಾ ರಾಧಾಕೃಷ್ಣನ್ ಮತ್ತು ಉದ್ಧವ್ ತಿವಾರಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ.